Vijaya Karnataka, Date: 24.03.2016, Page No. Ed-I

# 'ನ್ಯಾಯಯುತ ಬೆಲೆ ದೊರಕಿಸಲು ಪ್ರಯತ್ನ'

**ವಿಕ ಸುದ್ದಿಲೋಕ**, ರಾಯಚೂರು

ರೈತರ ಕೃಷಿ ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ದೊರಕಿಸುವ ನಿಟ್ಟಿನಲ್ಲಿ ಕೃಷಿ ಬೆಲೆ ಆಯೋಗವು ನೈಜ ಮಾಹಿತಿ ಸಂಗ್ರಹಿಸಿ ವರದಿಯನ್ನು ಸರಕಾರಕ್ಕೆ ಸಲ್ಲಿಸಿದೆ. ಕೃಷಿ ಉತ್ಪನ್ನಗಳಿಗೆ ಸರಕಾರ ಸೂಕ್ತ ಬೆಂಬಲ ಬೆಲೆ ನಿಗದಿಗೊಳಿಸುವ ಮೂಲಕ ರೈತರಿಗೆ ಅನುಕೂಲ ಕಲ್ಪಿಸುವಂತೆ ಶಿಫಾರಸುಗಳ ಮೂಲಕ ಕೋರಲಾಗಿದೆ ಎಂದು ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ.ಪ್ರಕಾಶ ಕಮ್ಮರಡಿ ಒತ್ತಾಯಿಸಿದರು.

ಅವರು ನಗರದ ರಾಯಚೂರು ಕೃಷಿ ವಿವಿಯ ಕೃಷಿ ಅರ್ಥ ಶಾಸ್ತ್ರ ವಿಭಾಗದಲ್ಲಿ ಕೃಷಿ ವಿವಿ ಹಾಗೂ ಕರ್ನಾಟಕ ಕೃಷಿ ಬೆಲೆ ಆಯೋಗದ ಸಹಯೋಗದಲ್ಲಿ ಬುಧವಾರ ಉತ್ಪಾದನಾ ವೆಚ್ಚ ಮತ್ತು ಮಾರುಕಟ್ಟೆ ಮಾಹಿತಿ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದರು.

**ಬೆಲೆ ಇಳಿಕೆ:** ಪ್ರಸ್ತುತ ಮಾರುಕಟ್ಟೆ ವ್ಯವಸ್ಥೆಯಲ್ಲಿ ಕೃಷಿ ಉತ್ಪನ್ನಗಳ ಬೆಲೆ ಸಂಪೂರ್ಣ ಕುಸಿದಿದ್ದು, ಆದರೆ ವ್ಯಾಪಾರಿಗಳು ಅಧಿಕ ಲಾಭ ಗಳಿಸುತ್ತಿದ್ದಾರೆ. ಇಂತಹ ಲಾಭದಲ್ಲಿ ರೈತರಿಗೆ ಪಾಲು ದೊರೆತಾಗ ಮಾತ್ರ ರೈತರಿಗೆ ಅನುಕೂಲವಾಗುತ್ತದೆ. ರಾಜ್ಯದಲ್ಲಿ ಬರ ಪರಿಸ್ಥಿತಿಯಿದ್ದು, ಬೆಳೆದಿರುವ ಬೆಳೆಗೆ ಮಾರುಕಟ್ಟೆಯಲ್ಲಿ ಸೂಕ್ತ ಬೆಲೆ ಸಿಗುತ್ತಿಲ್ಲ, ಇದರಿಂದ ರೈತನ ಪರಿಸ್ಥಿತಿ ಮತ್ತಷ್ಟು ಅಧೋಗತಿಗೆ ತಲುಪಿದೆ ಎಂದು ಕಳವಳ ವ್ಯಕ್ತಪಡಿಸಿದರು.

**ದುಬಾರಿ:** ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನಿಗದಿಗೊಳಿಸುವ ಕುರಿತು ಡಾ.ಸ್ವಾಮಿನಾಥನ್ ಆಯೋಗವು ಕೃಷಿ ವೆಚ್ಚ ಹೊರತುಪಡಿಸಿ, ರೈತರಿಗೆ ಶೇ. 50 ರಷ್ಟು ಅಧಿಕ ಲಾಭ ತರುವ ರೀತಿ ಬೆಂಬಲ ಬೆಲೆ ನಿಗದಿಗೆ ಸೂಚಿಸಿತ್ತು. ಆದರೆ, ಇಂದು ಕೃಷಿ ವೆಚ್ಚ ಮತ್ತಷ್ಟು ದುಬಾರಿಯಾಗಿದ್ದು, ಲಾಭಾಂಶ ಮತ್ತಷ್ಟು ಹೆಚ್ಚಿಸುವ ಅಗತ್ಯವಿದೆ ಎಂದರು. ಕೃಷಿ ಬೆಲೆ ಆಯೋಗವು 17 ಬೆಳೆಗಳ ಖರ್ಚು ವೆಚ್ಚ ಕುರಿತು ಅಧ್ಯಯನ ಕೈಗೊಂಡಿದ್ದು, ಅದರಲ್ಲಿ 16 ಬೆಳೆಗಳ ಉತ್ಪಾದನೆಯಿಂದ ರೈತರು ನಷ್ಟ ಅನು ಭವಿಸುತ್ತಿದ್ದಾರೆ. ಕೇವಲ ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನಿಗದಿಗೊಳಿಸಿದರೆ ಪ್ರಯೋಜನವಾಗದು ಎಂದ ಅವರು, ಅದರ ಬದಲಿಗೆ ಕೃಷಿ ಉತ್ಪನ್ನಕ್ಕೆ ತಗಲುವ ವೆಚ್ಚವನ್ನು ಸಂಶೋಧನೆಗಳ ಮೂಲಕ ಕಡಿತಗೊಳಿಸಿ, ರೈತರಿಗೆ ಅನುಕೂಲ ಹೆಚ್ಚಿಸುವ ಅವಶ್ಯಕತೆಯಿದೆ ಎಂದರು. ಕೃಷಿ ವಿವಿ ಕುಲಪತಿ ಡಾ.ಪಿ.ಎಂ. ಸಾಲಿಮಠ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಣ ನಿರ್ದೇಶಕ ಡಾ.ಬಿ.ವಿ. ಪಾಟೀಲ್, ಸಂಶೋಧನಾ ನಿರ್ದೇಶಕ ಡಾ.ಬಿ.ಎಂ.ಚಿತ್ತಾಪೂರ, ಡೀನ್ ಡಾ.ಎ.ಎಸ್.ಹಳೇಪ್ಯಾಟಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಕಿರಣ ಕುಮಾರ ಸೇರಿದಂತೆ ಅನೇಕರಿದ್ದರು. ನಾನಾ ಕಡೆಯಿಂದ ಆಗಮಿಸಿದ್ದ ರೈತರು ಪಾಲ್ಗೊಂಡಿದ್ದರು.



ರಾಯಚೂರಿನ ಕೃಷಿ ವಿವಿಯ ಕೃಷಿ ಅರ್ಥಶಾಸ್ತ್ರ ವಿಭಾಗದಲ್ಲಿ ಬುಧವಾರ ಕರ್ನಾಟಕ ಕೃಷಿ ಬೆಲೆ ಆಯೋಗದ ಉತ್ಪಾದನಾ ವೆಚ್ಚ ಮತ್ತು ಮಾರುಕಟ್ಟೆ ಮಾಹಿತಿ ಕೇಂದ್ರದ ಉದ್ಘಾಟನಾ ಸಮಾರಂಭವನ್ನು ಆಯೋಗದ ಅಧ್ಯಕ್ಷ ಡಾ. ಪ್ರಕಾಶ ಕಮ್ಮರಡಿ ಉದ್ಘಾಟಿಸಿದರು.

Udayavani, Date: 24.03.2016, Page No. 2

ಕೇಂದ್ರ ಉದ್ಘಾಟನೆ

■ ಬೆಲೆ ಏರಿಳಿತದಿಂದ ನಷ್ಟ ■ ರೈತರಿಗೆ ದೊರೆಯುತ್ತಿಲ್ಲ ಲಾಭ

# ಉತ್ಪಾದನಾ ವೆಚ್ಚಕ್ಕೆ ಅನುಗುಣ ಬೆಲೆ ನಿಗದಿ ಅಗತ್ಯ: ಡಾ। ಕಮ್ಮರಡಿ

**ರಾಯಚೂರು:** ರೈತರ ಕೃಷಿ ಉತ್ಪನ್ನಗಳಿಗೆ ಮಾರುಕಟ್ಟೆಯಲ್ಲಿ ನಿಗದಿತ ಬೆಲೆ ದೊರೆಯದೆ ಬೆಲೆ ಏರಿಳಿತದಿಂದ ನಷ್ಟ ಅನುಭವಿಸುವಂತಾಗಿದೆ. ರೈತರಿಗೆ ಉತ್ಪಾದನಾ ವೆಚ್ಚಧಾರಿತವಾಗಿ ಬೆಳೆಗಳ ಬೆಲೆ ನಿಗದಿಗೊಳಿಸುವುದು ಅಗತ್ಯವಾಗಿದೆ ಎಂದು ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ। ಪ್ರಕಾಶ ಕಮ್ಮರಡಿ ಹೇಳಿದರು.

ಕೃಷಿ ವಿಶ್ವವಿದ್ಯಾಲಯದಲ್ಲಿ ಕೃಷಿ ಬೆಲೆ ಆಯೋಗ, ಕೃಷಿ ಅರ್ಥಶಾಸ್ತ್ರ ವಿಭಾಗದ ವತಿಯಿಂದ ಹಮ್ಮಿಕೊಂಡಿದ್ದ ಕೃಷಿ ಉತ್ಪಾದನಾ ವೆಚ್ಚ ಮತ್ತು ಮಾರುಕಟ್ಟೆ ಮಾಹಿತಿ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಕೃಷಿ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗದಿಗೊಳಿಸುವ ಉದ್ದೇಶದಿಂದ ಈ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ. ಕೃಷಿ ತಜ್ಞ ಡಾ। ಸ್ವಾಮಿನಾಥನ್ ವರದಿಯಂತೆ ಕೃಷಿ ಉತ್ಪಾದನಾ ವೆಚ್ಚದ ಜೊತೆಗೆ ಶೇ.50ರಷ್ಟು ಲಾಭವನ್ನು ರೈತರಿಗೆ ನೀಡಬೇಕು ಎಂದು ಶಿಫಾರಸ್ಸು ಮಾಡಿದ್ದಾರೆ. ಇತ್ತೀಚಿಗೆ ತೊಗರಿ, ಈರುಳ್ಳಿ ಸೇರಿದಂತೆ ಇನ್ನಿತರ ದವಸ ಧಾನ್ಯಗಳ ಬೆಲೆ ಗಗನಕ್ಕೇರಿದ್ದರೂ ಇದರ ಲಾಭ ರೈತರಿಗೆ ದೊರೆಯುತ್ತಿಲ್ಲ, ಮಾರುಕಟ್ಟೆಯಲ್ಲಿ ಮಾತ್ರ ಬೆಲೆ ಏರಿಕೆಯಾಗಿದೆ ಎಂದು ತಿಳಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಿ ನೌಕರರು 7ನೇ ವೇತನ ಆಯೋಗ ಶಿಫಾರಸ್ಸಿನ ನಿರೀಕ್ಷೆಯಲ್ಲಿದ್ದಾರೆ. ಆದರೆ ರೈತರಿಗೆ ಯಾವುದೇ ವೇತನ ಆಯೋಗ ಇಲ್ಲ, ರೈತರು ವೈಜ್ಞಾನಿಕ ಬೆಲೆ ನಿರೀಕ್ಷೆಯಲ್ಲಿದ್ದು, ಕೃಷಿ ಬೆಲೆ ಆಯೋಗ ಮತ್ತು ರಾಜ್ಯ ಸರ್ಕಾರ ರೈತರಿಗೆ ಲಾಭ ಕಲ್ಪಿಸುವತ್ತ ಗಮನ ಹರಿಸಬೇಕಾಗಿದೆ. ರಸಗೊಬ್ಬರ, ಕ್ರಿಮಿನಾಶಕ, ಬಿತ್ತನೆ ವೆಚ್ಚವೂ ಸೇರಿಸಿ ಅಂದಾಜು ಮಾಡಲು ಕೃಷಿ ತೋಟಗಾರಿಕೆ , ಕೃಷಿ ಮಾರುಕಟ್ಟೆ ಅಧಿಕಾರಿಗಳು, ರೈತರನ್ನು ಒಳಗೊಂಡ ಸಮಿತಿ ಮಾಹಿತಿ ಸಂಗ್ರಹಿಸಲು ರಾಜ್ಯದ 5 ಕೃಷಿ ವಿವಿಗಳಲ್ಲಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದರು.

ಪ್ರಾಯೋಗಿಕವಾಗಿ 10 ರೈತರ ಒಳಗೊಂಡ ಸಮಿತಿ ರಾಜ್ಯದ ಎಲ್ಲ ಜಿಲ್ಲೆಗಳಿಂದ ಆಯಾ ಬೆಳೆಗಳ ಮಾಹಿತಿ ದಾಖಲಿಸಲಾಗುತ್ತದೆ. ಈಗಾಗಲೇ ಮಾಹಿತಿ ಕೇಂದ್ರಗಳನ್ನು ಪ್ರಾರಂಭಿಸಲಾಗುತ್ತಿದ್ದು ಇದರಿಂದ ಹಲವಾರು ವಿಚಾರಗಳನ್ನು ವಿನಿಮಯ ಮಾಡಿಕೊಳ್ಳಲಾಗಿದೆ. ಕೇಂದ್ರ ಸರ್ಕಾರ ಕೆಲ ಬೆಳೆಗಳಿಗೆ ಮಾತ್ರ ಬೆಂಬಲ ಬೆಲೆ ನೀಡುತ್ತಿದ್ದು, ಇನ್ನಿತರ ಬೆಳೆಗಳಿಗೆ ಬೆಂಬಲ ಬೆಲೆ ನೀಡುವಂತೆ ಒತ್ತಾಯಿಸಲಾಗಿದೆ ಎಂದು ಹೇಳಿದರು.

ಕೃಷಿ ವಿವಿಯ ಕುಲಪತಿ ಡಾ।ಪಿಎಂ.ಸಾಲಿಮಠ ಅಧ್ಯಕ್ಷತೆ ವಹಿಸಿದ್ದರು. ಕೃಷಿ ವಿವಿಯ ಡಾ। ಬಿ.ವಿ.ಪಾಟೀಲ, ಕೃಷಿ ಜಂಟಿ ನಿರ್ದೇಶಕ ಕಿರಣಕುಮಾರ, ಕೃಷಿ ವಿಸ್ತರಣಾ ನಿರ್ದೇಶಕ ಡಾ. ಎಸ್.ಕೆ.ಮೇಟಿ, ಡಾ।ಎ.ಎಸ್.ಹೊಳೇಪ್ಯಾಟಿ ಉಪಸ್ಥಿತರಿದ್ದರು.



ರಾಯಚೂರು: ನಗರದ ಕೃಷಿ ವಿವಿ ಸಭಾಂಗಣದಲ್ಲಿ ನಡೆದ ಕಾರ್ಯಾಗಾರದಲ್ಲಿ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ। ಪ್ರಕಾಶ ಕಮ್ಮರಡಿ ಮಾತನಾಡಿದರು.